ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/03/ಇಸಿಎಸ್(1)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com

ದಿನಾಂಕ:27.05.2024

## ಸುತ್ತೋಲೆ

ವಿಷಯ: ಮೇ-2024ರ ಡಿಪ್ಲೋಮ ಸೆಮಿಸ್ಟರ್ ಪರೀಕ್ಷಾ ಕಾರ್ಯಗಳನ್ನು ಬೋಧಕ / ಬೋಧಕೇತರ / ಕಛೇರಿ ಸಿಬ್ಬಂದಿಯವರು ಕಡ್ಡಾಯವಾಗಿ ನಿರ್ವಹಿಸುವ ಕುರಿತು.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ:ಬಿಟಿಇ/03/ಇಸಿಎಸ್(1)/2024 ದಿನಾಂಕ:17.04.2024

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಪ್ರಸ್ತುತ ಮೇ 2024 ರ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗಳು ರಾಜ್ಯಾದ್ಯಾಂತ ಸರ್ಕಾರಿ/ ಖಾಸಗಿಅನುದಾನಿತ/ ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಜರುಗುತ್ತಿದ್ದು, ಉಲ್ಲೇಖಿತ ಸುತ್ತೋಲೆಯನ್ವಯ ಥಿಯರಿ ಪರೀಕ್ಷೆಗಳ ಪ್ರಾರಂಭದ ದಿನದಿಂದ ಪರೀಕ್ಷೆಗಳು ಮುಗಿಯುವ ದಿನಗಳವರೆಗೂ ಮತ್ತು ತತ್ಸಂಬಂಧಿತ ಮೌಲ್ಯಮಾಪನ /ಮರುಮೌಲ್ಯಮಾಪನಗಳ ಅವಧಿಗಳಲ್ಲಿ ಪ್ರಾಂಶುಪಾಲರು ಸ್ವತ: ಸಾಂದರ್ಭಿಕ/ಪರಿವರ್ತಿತ/ಗಳಿಕೆ ರಜೆ ಸೇರಿದಂತೆ ಯಾವುದೇ ರಜೆ ಪಡೆಯದಂತೆ ಹಾಗೂ ಬೋಧಕ/ ಬೋಧಕೇತರ ಸಿಬ್ಬಂದಿಯವರಿಗೆ ಸದರಿ ರಜೆಗಳನ್ನು ಮಂಜೂರು ಮಾಡಬಾರದೆಂದು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿತ್ತು. ತುರ್ತು ಸಂದರ್ಭಗಳಲ್ಲಿ ಮಾತ್ರ ಕಾರ್ಯದರ್ಶಿಯವರ ಪೂರ್ವಾನುಮತಿ ಪಡೆದು ಕ್ರಮಕೈಗೊಳ್ಳಲು ತಿಳಿಸಲಾಗಿತ್ತು.

ಆದಾಗ್ಯೂ ಹಲವಾರು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಛೇರಿ ಸಿಬ್ಬಂದಿಯವರು ಪರೀಕ್ಷಾ ದಿನಗಳಲ್ಲಿ ಕಛೇರಿಗೆ ಗೈರುಹಾಜಾರಾಗುತ್ತಿರುವುದು, ಕಾರ್ಯದರ್ಶಿ, ತಾಂತ್ರಿಕ ಪರೀಕ್ಷಾ ಮಂಡಳಿ, ಇವರು ಕೆಲವೊಂದು ಪರೀಕ್ಷಾ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ ನೀಡಿದ ಸಂದರ್ಭದಲ್ಲಿ ಕಂಡುಬಂದಿದ್ದು, ಪರೀಕ್ಷೆಗಳನ್ನು ಸುಗಮವಾಗಿ ಜರುಗಿಸಲು ತೊಂದರೆಯಾಗುತ್ತಿರುವುದನ್ನು ತೀವ್ರವಾಗಿ ಪರಿಗಣಿಸಲಾಗಿದೆ.

ಪ್ರಯುಕ್ತ ಎಲ್ಲಾ ಪರೀಕ್ಷಾ ಕೇಂದ್ರಗಳ ಬೋಧಕ/ ಬೋಧಕೇತರ/ಕಛೇರಿ ಸಿಬ್ಬಂದಿಯವರು ಕಡ್ಡಾಯವಾಗಿ ಪ್ರತಿದಿನ ಪರೀಕ್ಷಾ ಅವಧಿಯಲ್ಲಿ ಕಛೇರಿಯಲ್ಲಿ ಹಾಜರಿದ್ದು, ವಹಿಸಿದ ಪರೀಕ್ಷಾ ಕರ್ತವ್ಯಗಳನ್ನು ನಿರ್ವಹಿಸಿ ಪರೀಕ್ಷೆಗಳನ್ನು ಸಮರ್ಪಕವಾಗಿ ಜರುಗಿಸಲು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಸಹಕರಿಸಲು ಸೂಚಿಸಲಾಗಿದೆ. ತಪ್ಪಿದ್ದಲ್ಲಿ ಅಂತಹ ಸಿಬ್ಬಂದಿಯವರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,

ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ & ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ –ಅಗತ್ಯ ಕ್ರಮಕ್ಕಾಗಿ (ಮಾಹಿತಿ ಮತ್ತು ಪರಿಚಲನೆ ಮೂಲಕ ಸಂಬಂಧಪಟ್ಟ ಸಿಬ್ಬಂದಿಯವರಿಗೆ ಸುತ್ತೋಲಿಸಲು).

ಪ್ರತಿ:
1. ಕಂಪ್ಯೂಟರ್ ವಿಭಾಗಕ್ಕೆ – ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
2. ಇ-ಗವರ್ನೆನ್ಸ್ ವಿಭಾಗ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3. ಮಾನ್ಯ ಆಯುಕ್ತರವರ ಆಪ್ತ ಶಾಖೆ
4. ನಿರ್ದೇಶಕರ ಆಪ್ತ ಶಾಖೆ
5. ಕಾರ್ಯದರ್ಶಿಯವರ ಆಪ್ತಶಾಖೆ